ಇ –ಆಡಳಿತ ಕೇಂದ್ರ
(ಕರ್ನಾಟಕ ಸಂಘ ಸಂಸ್ಥೆಗಳ ನೊಂದಾಯಿತ ಅಧಿನಿಯಮ 1960ರ ಪ್ರಕಾರ ನೊಂದಾಯಿತ ಸಂಸ್ಥೆ)
ಕೊಠಡಿ ಸಂಖ್ಯೆ :133, ಮೊದಲನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು560001.
ದೂರವಾಣಿ: 080-22032505, pdcb@karnataka.gov.in

ಸಂಖ್ಯೆ. CeG-11012/5/2019-PD(CB)-CeG ದಿನಾಂಕ: 16-06-2023

ಇವರಿಗೆ,

ಎಲ್ಲಾ ಜಿಲ್ಲಾಧಿಕಾರಿಗಳು,
ಕರ್ನಾಟಕ ಸರ್ಕಾರ,
ಕರ್ನಾಟಕ.

ಮಾನ್ಯರೇ,

ವಿಷಯ: ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಗಳನ್ನು ಸರ್ಕಾರಿ ಅಧಿಕಾರಿಗಳು ಮತ್ತು ನೌಕರರುಗಳಿಗೆ ನಡೆಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 90 ಇಜಿಎಂ 2023 ದಿನಾಂಕ: 20-05-2023.

2) ಸುತ್ತೋಲೆ ಸಂಖ್ಯೆ:ಸಿಆಸುಇ 29 ಸೇವನೆ 2020 ದಿನಾಂಕ: 03-04-2023.

********

ಮೇಲ್ಕಂಡ ವಿಷಯವಾಗಿ ಸರ್ಕಾರಿ ಅಧಿಕಾರಿಗಳು ಮತ್ತು ನೌಕರರಿಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಅನುಕೂಲ ಮಾಡಿಕೊಡಲಾಗಿದ್ದು, ಇನ್ನೂ ಸುಮಾರು 2,00,000ಕ್ಕೂ ಹೆಚ್ಚು ಸರ್ಕಾರಿ ಅಧಿಕಾರಿಗಳು ಮತ್ತು ನೌಕರರುಗಳು ಹಾಗೂ ನಿಗಮ-ಮಂಡಳಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಸಹ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೆಗೆದುಕೊಳ್ಳಲು ಉಲ್ಲೇಖ 1ರನ್ವಯ ಸರ್ಕಾರವು ದಿನಾಂಕ:31-12-2023ರವರೆಗೆ ಸಮಯಾವಕಾಶ ವಿಸ್ತರಿಸಿ, ಆದೇಶ ಹೊರಡಿಸಿರುತ್ತದೆ.

ಎಲ್ಲಾ ಸರ್ಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗೂ ನಿಗಮ-ಮಂಡಳಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು, ಅನುತ್ತೀರ್ಣರಾದವರು, ನೋಂದಾವಣೆ ಮಾಡಿ ಪರೀಕ್ಷೆ ತೆಗೆದುಕೊಳ್ಳದೇ ಇರುವವರೂ ಸಹ ದಿನಾಂಕ:31-12-2023ರ ಒಳಗಾಗಿ ಉತ್ತೀರ್ಣರಾಗಬೇಕಾಗಿರುತ್ತದೆ.

ಉಲ್ಲೇಖಿತ (2)ರ ಸುತ್ತೋಲೆಯನ್ವಯ ದಿನಾಂಕ: 31-12-2023ರೊಳಗೆ ಹಾಗೂ ನೇರ ನೇಮಕಾತಿ ಹೊಂದಿದ ನೌಕರರು ದಿನಾಂಕ: 31-12-2023ರೊಳಗೆ ಅಥವಾ ತಮ್ಮ ಪರಿವೀಕ್ಷಣಾ ಅವಧಿಯೊಳಗೆ ಯಾವುದು ನಂತರವೋ ಅದರೊಳಗಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದು ಕಡ್ಡಾಯವಾಗಿರುತ್ತದೆ. ಸದರಿ ಅವಧಿಯೊಳಗಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ನೌಕರರು ಪರಿವೀಕ್ಷಣಾ ಅವದಿ, ಮುಂಬಡ್ತಿ ಹಾಗೂ ವಾರ್ಷಿಕ ವೇತನ ಬಡ್ತಿ ಇತ್ಯಾದಿಗಳನ್ನು ಪಡೆಯಲು ಅನರ್ಹರಾಗುತ್ತಾರೆ. ಆದುದರಿಂದ, ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದೆ ಇರುವ ಸರ್ಕಾರಿ ನೌಕರರು ಕೂಡಲೇ ಪರೀಕ್ಷೆ ತೆಗೆದುಕೊಂಡು ಉತ್ತೀರ್ಣರಾಗಲು ಸೂಚಿಸಲಾಗಿದೆ.

ಆಯಾ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಇಲಾಖೆಯ ಅಧಿಕಾರಿಗಳು ತಮ್ಮ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೆಗೆದುಕೊಳ್ಳಲು ಮಾಹಿತಿ ನೀಡುವಂತೆ ಕೋರಲಾಗಿದೆ.

ಈ ಹಿನ್ನಲೆಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೆಗೆದುಕೊಳ್ಳದಿರುವ ಅಧಿಕಾರಿ/ನೌಕರರುಗಳು https://clt.karnataka.gov.in ಹಾಗೂ ನಿಗಮ ಮಂಡಳಿಗಳ ನೌಕರರು https://nkclt.clt.karnataka.gov.in ವೆಬ್‌ಸೈಟ್‌ನಲ್ಲಿ ತಮ್ಮ ವಿವರಗಳನ್ನು ನೋಂದಾಯಿಸಿ, ಪರೀಕ್ಷೆಯನ್ನು ತೆಗೆದುಕೊಳ್ಳುವಂತೆ ಕೋರಲಾಗಿದೆ.

16/1/2021

ಯೋಜನಾ ನಿರ್ದೇಶಕರು,
ಸಾಮರ್ಥ್ಯ ಸಂಘಟನೆ,
ಇ-ಆಡಳಿತ ಕೇಂದ್ರ.